138

**<u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಹಾಗೂ ಶ್ರೀ ಎಸ್. ಎಲ್. ಭೋಜೇಗೌಡ ಇವರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ: 40ಕ್ಕೆ ಉತ್ತರ</u>**

**ಪ್ರಸ್ತಾಪಿಸಿರುವ ವಿಷಯ:**

"ಹೊಸ ಪಿಂಚಣಿ ಯೋಜನೆಯಿಂದ ಸರ್ಕಾರಿ ನೌಕರರಿಗೆ ಹಾಗೂ ಅನುದಾನಿತ ಶಾಲಾ ಕಾಲೇಜಿನ ಸಿಬ್ಬಂದಿಗೆ ತುಂಬಾ ಅನ್ಯಾಯವಾಗಿರುವುದರಿಂದ ಅವರ ಕುಟುಂಬ ಜೀವನ ನಿರ್ವಹಣೆ ಕಷ್ಟಕರವಾಗಿದೆ ಈ ಸಂಬಂಧ ಅನುದಾನಿತ ಸಂಸ್ಥೆಗಳ ಸಿಬ್ಬಂದಿಗಳು ಒಳಗೊಂಡಂತೆ ಸರ್ಕಾರಿ ನೌಕರರಿಗೂ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರುವಂತೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯಬಯಸುತ್ತೇನೆ".

**ಉತ್ತರ:**

ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ:01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006 ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.

ರಾಜ್ಯದ ಸ್ವಾಯತ್ತ ಸಂಸ್ಥೆಗಳು, ನಿಗಮ-ಮಂಡಳಿಗಳು, ಸಂಘಗಳು, ವಿಶ್ವವಿದ್ಯಾನಿಲಯಗಳು, ರಾಜ್ಯದ ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೂ ಸಹ ಉದ್ಯೋಗದಾತರ ವಂತಿಗೆಯನ್ನು ತನ್ನ ಸ್ವಂತ ಸಂಪನ್ಮೂಲಗಳಿಂದ ಭರಿಸಿಕೊಳ್ಳುವ ಷರತ್ತಿಗೊಳಪಟ್ಟು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ: 01.04.2006 ರಿಂದ ಕಡ್ಡಾಯವಾಗಿ ಜಾರಿಗೆ ಬರುವಂತೆ ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ (ವಿ) 209 ಪಿಇಎನ್ 2012, ದಿನಾಂಕ: 21.02.2015ರಲ್ಲಿ ವಿಸ್ತರಿಸಲಾಗಿದೆ.

**<u>ಸಂಖ್ಯೆ: ಆಇ-ಪಿಇಎನ್/ 366 /2023</u>**

(ಸಿದ್ದರಾಮಯ್ಯ)
ಮುಖ್ಯಮಂತ್ರಿ